# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☏ : 0816-2255650, 2273511 ಫ್ಯಾಕ್ಸ್ :0816-2270719

ಸಂಖ್ಯೆ:ತುವಿ: ಪ.ವಿ:ಯು.ಜಿ.:ಪ.ಶುಲ್ಕ.:ವಿ.ನಿ.-04/2018-19 : 788 ದಿನಾಂಕ: 06.09.2018

## ಅಧಿಸೂಚನೆ

ವಿಷಯ: 2018 ರ ಅಕ್ಟೋಬರ್/ನವೆಂಬರ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿ ಸೆಮಿಸ್ಟರ್‌ಗಳು (CBCS & Non-CBCS) ಮತ್ತು ವಾರ್ಷಿಕ ಪದ್ಧತಿಯ ಬಿ.ಎ/ಬಿ.ಕಾಂ. (ಪೂರಕ) ಪದವಿಗಳಿಗೆ ಸಂಬಂಧಿಸಿದಂತೆ 2013-14 ನೇ ಶೈಕ್ಷಣಿಕ ಸಾಲಿನಿಂದ ಇಲ್ಲಿಯವರೆಗೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 06.09.2018

*****

2018-19 ನೇ ಶೈಕ್ಷಣಿಕ ಸಾಲಿನ 2018 ರ ಅಕ್ಟೋಬರ್/ನವೆಂಬರ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿ ಸೆಮಿಸ್ಟರ್ ಪದ್ಧತಿಯ ಪರೀಕ್ಷೆಗಳಾದ ಬಿ.ಎ./ಬಿ.ಎಸ್.ಡಬ್ಲ್ಯೂ./ಬಿ.ಎಸ್ಸಿ./ಬಿ.ಸಿ.ಎ./ಬಿ.ಕಾಂ./ಬಿ.ಬಿ.ಎಂ./ B.VOC, in HARDWARE TECHNOLOGY & NETWORKING ಪದವಿಗಳ I, III & V ನೇ ಸೆಮಿಸ್ಟರ್, ಬಿ.ಎ. ಇಂಟಿಗ್ರೇಟೆಡ್ ಕನ್ನಡ ಪಂಡಿತ್ ಪದವಿಯ V, VII & IX ನೇ ಸೆಮಿಸ್ಟರ್, ಬಿ.ಎಫ್.ಎ. ಪದವಿಯ I, III, V, VII & IX ನೇ ಸೆಮಿಸ್ಟರ್ ಮತ್ತು ವಾರ್ಷಿಕ ಪದ್ಧತಿಯ ಬಿ.ಎ./ಬಿ.ಕಾಂ. ಪದವಿಗಳ (ಪೂರಕ) I, II & III ನೇ ವರ್ಷಕ್ಕೆ ಸಂಬಂಧಿಸಿದಂತೆ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು

ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ವಿಷಯಗಳಿಗೆ/ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.

## ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 22.09.2018 |
| 2. | ವಿದ್ಯಾರ್ಥಿಗಳಿಗೆ ರೂ 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 28.09.2018 |
| 3. | ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 01.10.2018 |
| 4. | ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 03.10.2018 |

(...2)